ಇಡಿ/ಕೆಇಎ/ಆಡಳಿತ/ಸಿ.ಆರ್.-01/2023 ದಿನಾಂಕ: 26-12-2023

# ಪ್ರಕಟಣೆ

## ವೃತ್ತಿಪರ ಡಿಪ್ಲೊಮ ಪದವೀಧರ (working professional) ಅಭ್ಯರ್ಥಿಗಳಿಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶ

ಸರ್ಕಾರದ ನಿರ್ದೇಶನದಂತೆ ವೃತ್ತಿಪರ ಡಿಪ್ಲೊಮ ಪದವೀಧರ (working professional) ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷ / 3ನೇ ಸೆಮಿಸ್ಟರ್ ಇಂಜಿನಿಯರಿಂಗ್ ಕೋರ್ಸುಗಳಿಗೆ ಪ್ರವೇಶಾತಿ ನೀಡಲು ಕೆಇಎ ಮೂಲಕ ಪ್ರತ್ಯೇಕ ಅರ್ಜಿಗಳನ್ನು ಸಲ್ಲಿಸಲು ದಿನಾಂಕ 26-12-2023 - ರಾತ್ರಿ 11.59 ರ ವರೆಗೆ ವಿಸ್ತರಿಸಿರುವುದರಿಂದ, ರ್‍ಯಾಂಕ್ ಅನ್ನು 27-12-2023 ರ ಸಂಜೆ 6.00 ರ ನಂತರ ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು, ಮತ್ತು ದಾಖಲೆಗಳ ಪರಿಶೀಲನೆಯನ್ನು 29-12-2023 ಮತ್ತು 30-12-2023 ರಂದು ನಡೆಸಲಾಗುವುದು.

ಎಲ್ಲಾ ಮೂಲ ದಾಖಲೆಗಳೊಂದಿಗೆ ಅಭ್ಯರ್ಥಿಗಳು (ಎರಡು ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ) ಈ ಕೆಳಗಿನ ವೇಳಾಪಟ್ಟಿಯೊದಿಗೆ ಕೆಇಎ, ಬೆಂಗಳೂರು ಇಲ್ಲಿ ಹಾಜರಾಗುವುದು. ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲೆಗಳ ವಿವರಗಳನ್ನು ಡಿಸಿಇಟಿ-2023 ರ ಮಾಹಿತಿ ಪುಸ್ತಕದಲ್ಲಿ ನೀಡಲಾಗಿದೆ.

| ದಿನಾಂಕ | ಬೆಳಗಿನ ಅವಧಿ ಬೆ.10.30 ರಿಂದ ಮ.1.15 ಹಾಜರಾಗುವ ಸಮಯ: ಬೆ. 10.00 ರ್‍ಯಾಂಕ್ ಸಂಖ್ಯೆಗಳು | | ಮಧ್ಯಾಹ್ನದ ಅವಧಿ ಮ.2.00 ರಿಂದ ಮ.4.00 ಹಾಜರಾಗುವ ಸಮಯ: ಮ. 1.30 ರ್‍ಯಾಂಕ್ ಸಂಖ್ಯೆಗಳು | |
|---|---|---|---|---|
| | ಇಂದ | ವರೆಗೆ | ಇಂದ | ವರೆಗೆ |
| 29-12-2023 | 1 | 100 | 101 | 200 |
| 30-12-2023 | 201 | 300 | 301 | ಕೊನೆಯ ರ್‍ಯಾಂಕ್ |

ಕಾಲಕಾಲಕ್ಕೆ ನೀಡಲಾಗುವ ಸೂಚನೆಗಳಿಗೆ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿಗೆ ಭೇಟಿ ನೀಡುತ್ತಿರಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು.

ವೃತ್ತಿಪರ ಡಿಪ್ಲೊಮ ಪದವೀಧರ (working professional) 2023 ರ ಸೀಟು ಹಂಚಿಕೆಗೆ ಅರ್ಹಗೊಳ್ಳಲು ಮೂಲ ದಾಖಲೆಗಳನ್ನು ಸಲ್ಲಿಸುವ ಬಗ್ಗೆ

| ಕ್ರಮ ಸಂಖ್ಯೆ | ಮೂಲ ದಾಖಲೆಗಳ ವಿವರ |
|---|---|
| 01 | ಡಿಸಿಇಟಿ–2023ಕ್ಕೆ (working professional) ಭರ್ತಿ ಮಾಡಿ ಅಂತಿಮವಾಗಿ ಸಲ್ಲಿಸಿರುವ ಪ್ರತಿ. |
| 02 | ಎಸ್‌ಎಸ್‌ಎಲ್‌ಸಿ/ 10ನೇ ತರಗತಿಯ ಅಂಕಪಟ್ಟಿ |
| 03 | ಡಿಪ್ಲೊಮ ಅಂಕಪಟ್ಟಿಗಳು ಎಲ್ಲಾ ಸೆಮಿಸ್ಟರ್ / ಎಲ್ಲಾ ವರ್ಷದ ಮೂಲ ಅಂಕಪಟ್ಟಿಗಳು |
| 04 | 7 ವರ್ಷದ ವ್ಯಾಸಂಗ ಪ್ರಮಾಣ ಪತ್ರ:<br>1 ರಿಂದ ಡಿಪ್ಲೊಮ ಅಂತಿಮ ವರ್ಷದವರೆಗೆ ಒಟ್ಟು 7 ವರ್ಷದ ವ್ಯಾಸಂಗ ಪ್ರಮಾಣಪತ್ರ (ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿ / ಸಾರ್ವಜನಿಕ ಶಿಕ್ಷಣ ಉಪ ನಿರ್ದೇಶಕರು ಮೇಲುರುಜು ಸಹಿ ಹೊಂದಿರುವ) ಎಸ್.ಎಸ್.ಎಲ್.ಸಿ. ಅಥವಾ ಡಿಪ್ಲೊಮ ಒಳಗೊಂಡಂತೆ.<br>7 ವರ್ಷದ ವ್ಯಾಸಂಗ ಪ್ರಮಾಣ ಪತ್ರದಲ್ಲಿ ಸಿಬಿಎಸ್‌ಸಿ / ಐಸಿಎಸ್‌ಸಿ ಅಭ್ಯರ್ಥಿಗಳಿಗೆ ಮೇಲುರುಜು ಅಗತ್ಯತೆ ಇರುವುದಿಲ್ಲ. |

**ಮುಂದಿನ ದಾಖಲೆಗಳನ್ನು "ಅನ್ವಯವಾಗುವಂತಿದ್ದ ಪಕ್ಷದಲ್ಲಿ ಮಾತ್ರ" ಸಲ್ಲಿಸಬೇಕು**

| | |
|---|---|
| 06 | **ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ :**<br>1ನೇ ತರಗತಿಯಿಂದ 10ನೇ ತರಗತಿಯವರೆಗೆ ಹತ್ತು ಪೂರ್ಣಾವಧಿ ಶೈಕ್ಷಣಿಕ ವರ್ಷಗಳ ಕಾಲ ಕರ್ನಾಟಕದಲ್ಲಿ ಅಥವಾ ಕರ್ನಾಟಕ ರಾಜ್ಯದ ಹೊರಗಡೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ವಿದ್ಯಾರ್ಥಿಗಳು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುರುಜು ಮಾಡಿರುವ ಕನ್ನಡ ಮಾಧ್ಯಮ ಪ್ರಮಾಣಪತ್ರ |
| 07 | **ಗ್ರಾಮೀಣ ವ್ಯಾಸಂಗ ಪ್ರಮಾಣ ಪತ್ರ:**<br>ಕರ್ನಾಟಕ ರಾಜ್ಯದಲ್ಲಿನ ಗ್ರಾಮೀಣ ಪ್ರದೇಶಗಳಲ್ಲಿ ಇರುವ ಶಿಕ್ಷಣ ಸಂಸ್ಥೆಗಳಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ, 10 ಪೂರ್ಣಾವಧಿ ಶೈಕ್ಷಣಿಕ ವರ್ಷಗಳವರೆಗೆ ವ್ಯಾಸಂಗ ಮಾಡಿರುವಂತಹ ಗ್ರಾಮೀಣ ವಿದ್ಯಾರ್ಥಿಗಳು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುರುಜು ಮಾಡಿರುವ ಗ್ರಾಮೀಣ ವ್ಯಾಸಂಗ ಪ್ರಮಾಣಪತ್ರ.<br>ಸಾಮಾನ್ಯ ವರ್ಗದ ಅಭ್ಯರ್ಥಿಗಳು ಗ್ರಾಮೀಣ ವ್ಯಾಸಂಗ ಪ್ರಮಾಣಪತ್ರದ ಜೊತೆಯಲ್ಲಿ ಪರಿಶೀಲನಾ ಪ್ರಮಾಣಪತ್ರ ವಿದ್ಯಾರ್ಥಿಗಳಿಗೆ ಮಾತ್ರ. |
| 08 | **ಜಾತಿ ಪ್ರಮಾಣ ಪತ್ರ/ ಜಾತಿ ಮತ್ತು ಆದಾಯ ಪ್ರಮಾಣಪತ್ರ : (ಚಾಲ್ತಿಯಲ್ಲಿರುವ / Validity ಇರುವ)**<br>ಮೀಸಲಾತಿ ಪ್ರಯೋಜನಗಳನ್ನು ಕೋರುವುದಕ್ಕೆ ಸಂಬಂಧಿಸಿದಂತೆ, ಸಂಬಂಧಪಟ್ಟ ತಹಸೀಲ್ದಾರ್‌ರವರಿಂದ ಪಡೆದಿರುವ ಜಾತಿ ಪ್ರಮಾಣ ಪತ್ರ/ ಜಾತಿ ಮತ್ತು ಆದಾಯ ಪ್ರಮಾಣಪತ್ರ / ಆದಾಯ ಪ್ರಮಾಣ ಪತ್ರಗಳು (ಅಧಿಕಾರವ್ಯಾಪ್ತಿಯಿರುವ ಸಂಬಂಧಪಟ್ಟ ತಹಸೀಲ್ದಾರ್‌ರವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭ್ಯರ್ಥಿಗಳು ನಮೂನೆ 'ಡಿ' ನಲ್ಲಿ ಮತ್ತು ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ನಲ್ಲಿ ಹಾಗು ಇತರ ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ ಮತ್ತು 3ಬಿ ಗಳಂತಹ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ನೀಡಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು)<br>ಅಲ್ಲದೆ, ಮೀಸಲು ಪ್ರವರ್ಗದಡಿಯಲ್ಲಿ ಸೀಟನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ಕ್ಕೆ ಸೇರಿರುವ ವಿದ್ಯಾರ್ಥಿಗಳು, ಅಧಿಕಾರವ್ಯಾಪ್ತಿಯ ತಹಸೀಲ್ದಾರ್‌ರವರು ನೀಡಿರುವ ಆದಾಯ ಪ್ರಮಾಣಪತ್ರ, ಬೋಧನ ಶುಲ್ಕ ಮರುಪಾವತಿ ಮತ್ತು ಭಾರತ ಸರ್ಕಾರದ ವಿದ್ಯಾರ್ಥಿ ವೇತನ ಪ್ರಯೋಜನ ಪಡೆಯುವುದಕ್ಕಾಗಿ. |
| 09 | 371 (ಜೆ)) – ಹೈದರಾಬಾದ್–ಕರ್ನಾಟಕ ಪ್ರದೇಶ ಮೀಸಲಾತಿ :<br>ಹೈದರಾಬಾದ್–ಕರ್ನಾಟಕ ಪ್ರದೇಶ ಮೀಸಲಾತಿ (ಅನುಚ್ಛೇದ 371 (ಜೆ))ಯನ್ನು ಕೋರುವ ವಿದ್ಯಾರ್ಥಿಗಳು, ಸಂಬಂಧಪಟ್ಟ ಉಪ ವಿಭಾಗಾಧಿಕಾರಿ (ಅಸಿಸ್ಟೆಂಟ್ ಕಮಿಷನರ್)ಅವರು ಅನುಬಂಧ–ಎ (ಅರ್ಹತಾ ಪ್ರಮಾಣಪತ್ರ–ನಿಯಮ 3(3))ರಲ್ಲಿ ನೀಡಿರುವ ಪ್ರಮಾಣಪತ್ರ. |
| 10 | ತಂದೆ–ತಾಯಿ/ ಪೋಷಕರ, ವಾಸ ಸ್ಥಳ/ ವ್ಯಾಸಂಗ/ ಉದ್ಯೋಗದ ಆಧಾರದ ಮೇಲೆ ಸರ್ಕಾರಿ ಸೀಟುಗಳಿಗೆ ಸಂಬಂಧಿಸಿದಂತೆ ಅರ್ಹತೆಯನ್ನು ಕೋರುವ ವಿದ್ಯಾರ್ಥಿಗಳು, ಅವರ ತಂದೆ–ತಾಯಿ / ಪೋಷಕರ ವ್ಯಾಸಂಗ ಪ್ರಮಾಣಪತ್ರ/ ತಂದೆ–ತಾಯಿ/ ಪೋಷಕರ ಸ್ವಂತ ಪಟ್ಟಣ / ಸ್ವಂತ ಊರಿನ ಪ್ರಮಾಣಪತ್ರ/ ತಂದೆ–ತಾಯಿ/ಪೋಷಕರ ವಾಸಸ್ಥಳದ ಪ್ರಮಾಣಪತ್ರ / ತಂದೆ–ತಾಯಿ / ಪೋಷಕರ ಉದ್ಯೋಗ ಪ್ರಮಾಣಪತ್ರ / ತಂದೆ–ತಾಯಿ / ಪೋಷಕರ ಸಂಚಿತ ದಾಖಲೆ / ತಂದೆ–ತಾಯಿ / ಪೋಷಕರ ಅಂಕಪಟ್ಟಿ ಮೊದಲಾದವುಗಳು. |
| 11 | ಹೊರನಾಡು ಮತ್ತು ಗಡಿನಾಡು ಕನ್ನಡಿಗ ಕೋಟಾದ ಅಡಿಯಲ್ಲಿ ಅರ್ಹತೆಯನ್ನು ಕೋರುವಂತಹ ಅಭ್ಯರ್ಥಿಗಳು (ತಮ್ಮ ಮಾತೃ ಭಾಷೆ ಬಗ್ಗೆ) ಯುಕ್ತವಾಗಿ ಘೋಷಿಸಿರುವ ಅಫಿಡವಿಟ್ (ಖಂಡ ಸಿ & ಡಿ). |
| 12 | ಮಾನ್ಯತೆ ಇರುವ ನಾಟಾ ಪರೀಕ್ಷೆಯ ಅಂಕಪಟ್ಟಿ – ಆರ್ಕಿಟೆಕ್ಚರ್ ಕೋರ್ಸಿಗೆ ಮಾತ್ರ |